ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 750
ಉತ್ತರಿಸಬೇಕಾದ ದಿನಾಂಕ : 17.09.2021.
ಸದಸ್ಯರ ಹೆಸರು : ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ)
ಉತ್ತರಿಸುವ ಸಚಿವರು : ಮಾನ್ಯ ರೇಷ್ಮೆ, ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು.

<table>
<tr><th>ಕ್ರ. ಸಂ.</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ಟೋಕಿಯೋದಲ್ಲಿ ನಡೆದಂತಹ ಒಲಂಪಿಕ್ಸ್ ಮತ್ತು ಪ್ಯಾರಾ ಒಲಂಪಿಕ್ಸ್ ಕ್ರೀಡಾಕೂಟದಲ್ಲಿ ಕರ್ನಾಟಕದಿಂದ ಭಾಗವಹಿಸಿದ ಕ್ರೀಡಾಪಟುಗಳ ಸಂಖ್ಯೆ ಎಷ್ಟು; (ವಿವರ ನೀಡುವುದು)</td><td>ಟೋಕಿಯೋದಲ್ಲಿ ನಡೆದ ಒಲಂಪಿಕ್ಸ್ ಮತ್ತು ಪ್ಯಾರಾ ಒಲಂಪಿಕ್ಸ್ ಕ್ರೀಡಾಕೂಟದಲ್ಲಿ ಕರ್ನಾಟಕದಿಂದ ಭಾಗವಹಿಸಿದ ಒಟ್ಟು ಕ್ರೀಡಾಪಟುಗಳ ಸಂಖ್ಯೆ 05. ಕ್ರೀಡಾಪಟುಗಳ ವಿವರ ಕೆಳಕಂಡಂತಿದೆ:-
<table><tr><th>ಕ್ರ.ಸಂ</th><th>ಹೆಸರು</th><th>ಕ್ರೀಡೆ</th></tr><tr><td>1</td><td>ಕು. ಅದಿತಿ ಅಶೋಕ್</td><td>ಗಾಲ್ಫ್</td></tr><tr><td>2</td><td>ಶ್ರೀಹರಿ ನಟರಾಜ್</td><td>ಈಜು</td></tr><tr><td>3</td><td>ಫೌವಾದ್ ಮಿರ್ಜಾ</td><td>ಈಕ್ವೆಸ್ಟ್ರಿಯನ್</td></tr><tr><td>4</td><td>ಶಕೀನಾ ಖಾತೂನ್</td><td>ಪ್ಯಾರಾ ಪವರ್ ಲಿಫ್ಟಿಂಗ್</td></tr><tr><td>5</td><td>ಶ್ರೀ ನಿರಂಜನ್ ಎಂ</td><td>ಪ್ಯಾರಾ ಈಜು</td></tr></table></td></tr>
<tr><td>ಆ)</td><td>ಒಲಂಪಿಕ್ಸ್ ಮತ್ತು ಪ್ಯಾರಾ ಒಲಂಪಿಕ್ಸ್ ನಲ್ಲಿ ಪದಕ ಪಡೆದ ಕ್ರೀಡಾಪಟುಗಳ ಸಂಖ್ಯೆ ಎಷ್ಟು; (ವಿವರ ನೀಡುವುದು)</td><td rowspan="2">ಮೇಲಿನ ಐವರು ಕ್ರೀಡಾಪಟುಗಳು ಒಲಂಪಿಕ್ಸ್ ಮತ್ತು ಪ್ಯಾರಾ ಒಲಂಪಿಕ್ಸ್ ನಲ್ಲಿ ಯಾವುದೇ ಪದಕ ಪಡೆದಿರುವುದಿಲ್ಲ.</td></tr>
<tr><td>ಇ)</td><td>ಸದರಿ ಕ್ರೀಡಾಪಟುಗಳಿಗೆ ಯಾವ ಯಾವ ಕ್ರೀಡೆಗಳಲ್ಲಿ ಯಾವ ಯಾವ ಪದಕಗಳನ್ನು ಗಳಿಸಿದ್ದಾರೆ; (ಪೂರ್ಣ ವಿವರ ನೀಡುವುದು)</td></tr>
<tr><td>ಈ)</td><td>ಸದರಿ ಕ್ರೀಡಾಕೂಟದಲ್ಲಿ ಭಾಗವಹಿಸಿದ ಕ್ರೀಡಾಪಟುಗಳಿಗೆ ತರಬೇತಿಗಾಗಿ ಸರ್ಕಾರದ ವತಿಯಿಂದ ಯಾವ ಸೌಲಭ್ಯಗಳನ್ನು ನೀಡಲಾಗಿತ್ತು; (ಪೂರ್ಣ ವಿವರ ನೀಡುವುದು)</td><td>ಟೋಕಿಯೋ ಒಲಂಪಿಕ್ಸ್ ಕ್ರೀಡಾಕೂಟಕ್ಕೆ ಆಯ್ಕೆಯಾದ ಕರ್ನಾಟಕದ ಒಟ್ಟು 5 ಕ್ರೀಡಾಪಟುಗಳಿಗೆ ತಲಾ ರೂ.10.00 ಲಕ್ಷಗಳ ಪ್ರೋತ್ಸಾಹಧನವನ್ನು ನೀಡಲಾಗಿರುತ್ತದೆ.</td></tr>
<tr><td>ಉ)</td><td>ಸದರಿ ಕ್ರೀಡಾಕೂಟದಲ್ಲಿ ಭಾಗವಹಿಸಿದ ಕ್ರೀಡಾಪಟುಗಳಿಗೆ ಸರ್ಕಾರ ಯಾವ ಯಾವ ಸೌಲಭ್ಯಗಳನ್ನು ನೀಡಲಾಗಿತ್ತು; (ಆರ್ಥಿಕ ಹಾಗೂ ಇತರೆ ಮೂಲಭೂತ ಸೌಲಭ್ಯಗಳ ಪೂರ್ಣ ವಿವರಗಳನ್ನು ನೀಡುವುದು)</td><td>ಟೋಕಿಯೋ ಒಲಂಪಿಕ್ಸ್ ಕ್ರೀಡಾಕೂಟಕ್ಕೆ ಆಯ್ಕೆಯಾದ ಕರ್ನಾಟಕದ ಒಟ್ಟು 5 ಕ್ರೀಡಾಪಟುಗಳಿಗೆ ತಲಾ ರೂ.10.00 ಲಕ್ಷಗಳ ಪ್ರೋತ್ಸಾಹಧನವನ್ನು ನೀಡಲಾಗಿರುತ್ತದೆ.

ಸನ್ಮಾನ್ಯ ಘನತೆವೆತ್ತ ಗೌರವಾನ್ವಿತ ರಾಜ್ಯಪಾಲರು, ಕರ್ನಾಟಕ ಇವರು ಟೋಕಿಯೋ ಒಲಂಪಿಕ್ಸ್ ನಲ್ಲಿ ಭಾಗವಹಿಸಿದ ಮೂರು ಕರ್ನಾಟಕ ಕ್ರೀಡಾಪಟುಗಳಿಗೆ ಮತ್ತು</td></tr>
</table>

		ಮಹಿಳಾ ಹಾಕಿ ತಂಡದ ಸಹಾಯಕ ತರಬೇತುದಾರರಾಗಿ ಕಾರ್ಯ ನಿರ್ವಹಿಸಿದ ಒಬ್ಬ ತರಬೇತುದಾರರಿಗೆ ತಲಾ ರೂ.1.00 ಲಕ್ಷಗಳ ನಗದು ಪ್ರೋತ್ಸಾಹಧನವನ್ನು ನೀಡಿ ಸನ್ಮಾನಿಸಿರುತ್ತಾರೆ.
ಊ)	ಪದಕ ಪಡೆದ ಕ್ರೀಡಾಪಟುಗಳಿಗೆ ರಾಜ್ಯ ಸರ್ಕಾರದಿಂದ ಪ್ರೋತ್ಸಾಹದಾಯಕವಾಗಿ ನೀಡಲಾಗುತ್ತಿರುವ ಸೌಲಭ್ಯಗಳೇನು? (ವಿವರ ನೀಡುವುದು)	ಸರ್ಕಾರಿ ಆದೇಶ ಸಂಖ್ಯೆ:ಯುಸೇಇ 280 ಯುಸೇಕ್ರೀ 2017; ದಿನಾಂಕ:09-10-2017ರ ಆದೇಶದ ಪ್ರಕಾರ ಒಲಂಪಿಕ್ಸ್ ಕ್ರೀಡಾಕೂಟದಲ್ಲಿ ಭಾಗವಹಿಸಿ ಚಿನ್ನದ ಪದಕ ಪಡೆದ ಕ್ರೀಡಾಪಟುಗಳಿಗೆ ರೂ.500.00, ಬೆಳ್ಳಿ ಪದಕ ಪಡೆದ ಕ್ರೀಡಾಪಟುಗಳಿಗೆ ರೂ.300.00 ಮತ್ತು ಕಂಚಿನ ಪದಕ ಪಡೆದ ಕ್ರೀಡಾಪಟುಗಳಿಗೆ ರೂ.200.00 ಲಕ್ಷಗಳ ನಗದು ಬಹುಮಾನ ನೀಡಲು ಅಸ್ಪದವಿದೆ. ಒಲಂಪಿಕ್ಸ್, ಪ್ಯಾರಾಲಿಂಪಿಕ್ಸ್ ನಲ್ಲಿ ಪದಕ ವಿಜೇತರಾಗುವ ರಾಜ್ಯದ ಕ್ರೀಡಾಪಟುಗಳಿಗೆ ಸರ್ಕಾರದ ಇಲಾಖೆಗಳಲ್ಲಿ ಗ್ರೂಪ್-ಎ ವೃಂದದ ಹುದ್ದೆಗಳನ್ನು ಹಾಗೂ ಏಷ್ಯನ್ ಗೇಮ್ಸ್ ಮತ್ತು ಕಾಮನ್ ವೆಲ್ತ್ ಕ್ರೀಡಾಕೂಟಗಳಲ್ಲಿ ಪದಕ ವಿಜೇತರಿಗೆ ಗ್ರೂಪ್-ಬಿ ವೃಂದದ ಹುದ್ದೆಗಳನ್ನು ನೀಡಲು ಕರಡು ನಿಯಮಾವಳಿಗಳನ್ನು ಸಿದ್ದಪಡಿಸಿ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಗೆ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.

ವೈಎಸ್‌ಡಿ/ಇಬಿಬಿ/139/2021

(ಡಾ. ನಾರಾಯಣಗೌಡ)
ರೇಷ್ಮೆ, ಯುವ ಸಬಲೀಕರಣ ಮತ್ತು
ಕ್ರೀಡಾ ಸಚಿವರು.